# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103☏:0816-2255650, 2273511,ಫ್ಯಾಕ್ಸ್ :0816-2270719

**ಸಂಖ್ಯೆ:ತುವಿ: ಪ.ವಿ:ವಿ.ನಿ.-09:2020-21: 401** **ದಿನಾಂಕ: 01.12.2020**

## ಅಧಿಸೂಚನೆ

**ವಿಷಯ:** ವಿವಿಧ ಸ್ನಾತಕೋತ್ತರ ಪದವಿಗಳ ದ್ವಿತೀಯ (ಪೂರಕ) ಮತ್ತು ನಾಲ್ಕನೇ (ನವೀನ ಮತ್ತು ಪೂರಕ) ಸೆಮಿಸ್ಟರ್ ಪರೀಕ್ಷೆಗಳ (CBCS) ಉತ್ತರ ಪತ್ರಿಕೆಗಳ ಚಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಕುರಿತು.

**ಉಲ್ಲೇಖ:** ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 27.11.2020

*****

2020 ರ ಸೆಪ್ಟಂಬರ್/ಅಕ್ಟೋಬರ್ ಮಾಹೆಗಳಲ್ಲಿ ನಡೆದ ವಿವಿಧ ಸ್ನಾತಕೋತ್ತರ ಪದವಿ ದ್ವಿತೀಯ (ಪೂರಕ) ಮತ್ತು ನಾಲ್ಕನೇ (ನವೀನ ಮತ್ತು ಪೂರಕ) ಸೆಮಿಸ್ಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಈಗಾಗಲೇ ಫಲಿತಾಂಶ ಪ್ರಕಟಿಸಲಾಗಿದ್ದು, ಉತ್ತರ ಪತ್ರಿಕೆಗಳ ಚಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಇಚ್ಛಿಸುವ ವಿದ್ಯಾರ್ಥಿಗಳು ಆಯಾ ವಿಭಾಗಗಳಲ್ಲಿ/ಕಾಲೇಜುಗಳಲ್ಲಿ ವಿಭಾಗದ ಮುಖ್ಯಸ್ಥರು/ಪ್ರಾಂಶುಪಾಲರ ಮುಖಾಂತರ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವುದು ಮತ್ತು ವಿಭಾಗ/ ಕಾಲೇಜಿನವರು ಸದರಿ ಮಾಹಿತಿಯನ್ನು ಈ ಕೆಳಗೆ ನೀಡಿದ ದಿನಾಂಕದೊಳಗೆ **ಕುಲಸಚಿವರು(ಪರೀಕ್ಷಾಂಗ),ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.** ಇವರಿಗೆ ಸಲ್ಲಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

| | |
|---|---|
| ಚಾಲೆಂಜ್ ಮೌಲ್ಯಮಾಪನದ ಶುಲ್ಕ ಪ್ರತಿ ವಿಷಯಕ್ಕೆ (Per Paper) | **ರೂ.1,310-00** |
| ವಿದ್ಯಾರ್ಥಿಗಳು ಚಾಲೆಂಜ್ ಮೌಲ್ಯಮಾಪನಕ್ಕೆ ಕಾಲೇಜು/ವಿಭಾಗದಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ | 09.12.2020 |
| ವಿಭಾಗ/ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | 10.12.2020 |
| ಚಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ವಿಭಾಗ/ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕಡೆಯ ದಿನಾಂಕ | 11.12.2020 |

**ವಿಶೇಷ ಸೂಚನೆ:-** 1). **ಚಾಲೆಂಜ್ ಮೌಲ್ಯಮಾಪನದಲ್ಲಿ ಪಡೆದ ಅಂಕಗಳೇ ಅಂತಿಮವಾಗಿರುತ್ತದೆ. ಕಡೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.**

2) **ಈಗಾಗಲೇ ತಾತ್ಕಾಲಿಕ ಪದವಿ ಪ್ರಮಾಣ ಪತ್ರ ಪಡೆದ ವಿದ್ಯಾರ್ಥಿಗಳು ಚಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ ಆದಾಗ್ಯೂ ಚಾಲೆಂಜ್ ಮೌಲ್ಯಮಾಪನಕ್ಕಾಗಿ ವಿದ್ಯಾರ್ಥಿಗಳು ಶುಲ್ಕ ಪಾವತಿಸಿದರೆ ಸದರಿ ವಿದ್ಯಾರ್ಥಿಯ ಉತ್ತರ ಪತ್ರಿಕೆಯನ್ನು ಚಾಲೆಂಜ್ ಮೌಲ್ಯಮಾಪನಕ್ಕೆ ಪರಿಗಣಿಸುವುದಿಲ್ಲ.**

3) **ಶುಲ್ಕವನ್ನು ಪಾವತಿಸಿಕೊಳ್ಳುವ/ಇತರೆ ಸಂದರ್ಭದಲ್ಲಿ ಕೋವಿಡ್-19 ಕೊರೋನಾ ವೈರಸ್‌ಗೆ ಮುಂಜಾಗ್ರತಾ ಕ್ರಮವನ್ನು ಅಳವಡಿಸಿಕೊಂಡು ಮತ್ತು ಸಾಮಾಜಿಕ ಅಂತರವನ್ನು ಕಡ್ಡಾಯವಾಗಿ ಕಾಯ್ದುಕೊಳ್ಳುವಂತೆ ಸೂಚಿಸಲಾಗಿದೆ.**

**ಆದೇಶದ ಮೇರೆಗೆ,**

ಉಪಕುಲಸಚಿವರು (ಪರೀಕ್ಷಾಂಗ)

**ಗೆ,**

ನಿರ್ದೇಶಕರು / ಮುಖ್ಯಸ್ಥರು/ಸಂಯೋಜಕರು/ಪ್ರಾಂಶುಪಾಲರು/ ವಿವಿಧ ಸ್ನಾತಕೋತ್ತರ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಕಛೇರಿ ಪ್ರತಿ.